ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1618
ಸದಸ್ಯರ ಹೆಸರು : ಶ್ರೀ ಪಿ.ಆರ್.ರಮೇಶ್
ಉತ್ತರಿಸುವ ದಿನಾಂಕ : 11-03-2022
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದ ಸಮಾಜ ಕಲ್ಯಾಣ ಇಲಾಖೆಯಿಂದ ಜಾರಿಯಲ್ಲಿರುವ ಯೋಜನೆಗಳಾವುವು: (ವಿವರ ನೀಡುವುದು)	ಸಮಾಜ ಕಲ್ಯಾಣ ಇಲಾಖೆಯಡಿ ಜಾರಿಯಲ್ಲಿರುವ ಯೋಜನೆಗಳ ವಿವರವನ್ನು ಅನುಬಂಧ-1ರಲ್ಲಿ ನೀಡಿದೆ.
ಆ)	ಪ್ರಸ್ತುತ ಅಥವಾ ಮುಂಬರುವ ವರ್ಷಗಳಲ್ಲಿ ಪರಿಶಿಷ್ಟ ಜಾತಿಯ ಜನಾಂಗವನ್ನು ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಪ್ರೋತ್ಸಾಹಿಸುವ ಯಾವುದಾದರೂ ನೂತನ ಯೋಜನೆ ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)	2022-23 ನೇ ಸಾಲಿನ ಆಯವ್ಯಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿಯವರ ಸಾಮಾಜಿಕ ಮತ್ತು ಶೈಕ್ಷಣಿಕವಾಗಿ ಪ್ರೋತ್ಸಾಹಿಸುವ ನೂತನ ಯೋಜನೆಗಳ ವಿವರಗಳನ್ನು ಅನುಬಂಧ-2 ರಲ್ಲಿ ನೀಡಿದೆ.

ಸಂಖ್ಯೆ: ಸಕಇ 134 ಎಸ್‌ಡಿಸಿ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಪಿ.ಆರ್ ರಮೇಶ್ (ನಾಮನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1618ಕ್ಕೆ ಅನುಬಂಧ-1

ಕ್ರ ಸಂ.	ಕಾರ್ಯಕ್ರಮಗಳು/ಯೋಜನೆಗಳು
I. ಶೈಕ್ಷಣಿಕ ಅಭಿವೃದ್ಧಿ ಕಾರ್ಯಕ್ರಮಗಳು	
1	ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ
2	ವಸತಿ ಶಾಲೆಗಳ ನಿರ್ವಹಣೆ
3	ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ
4	ಅನೈರ್ಮಲ್ಯ ವೃತ್ತಿಯಲ್ಲಿ ತೊಡಗಿರುವ ಪೋಷಕರ ಮಕ್ಕಳಿಗೆ ಪ್ರೋತ್ಸಾಹಧನ
5	ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ
6	ರಾಷ್ಟ್ರೀಯ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಧನಸಹಾಯ
7	ಬುಕ್‌ಬ್ಯಾಂಕ್ ಯೋಜನೆ
8	ಪ್ರತಿಭಾ ಪುರಸ್ಕಾರ
9	ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶ
10	ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಧನಸಹಾಯ
II. ಮೂಲಭೂತ ಸೌಕರ್ಯಗಳು	
1	ಸಮುದಾಯ ಭವನಗಳ ನಿರ್ಮಾಣ
2	ಪರಿಶಿಷ್ಟ ಜಾತಿಯ ಕಾಲೋನಿಗಳಿಗೆ ಮೂಲಭೂತ ಸೌಕರ್ಯ
3	ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಧನಸಹಾಯ
4	ವಿಶ್ವವಿದ್ಯಾನಿಲಯಗಳಲ್ಲಿ ಸಂಶೋಧನಾ ಕೇಂದ್ರಗಳನ್ನು ಸ್ಥಾಪಿಸಲು ಧನಸಹಾಯ
5	ಸ್ಮಶಾನ ಭೂಮಿ ಅಭಿವೃದ್ಧಿ
6	ಪ್ರಧಾನ ಮಂತ್ರಿ ಆದರ್ಶ ಗ್ರಾಮ ಯೋಜನೆ.
III. ತರಬೇತಿ ಕಾರ್ಯಕ್ರಮ	
1	ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ
2	ಜಿ.ಎನ್.ಎಂ. ಮತ್ತು ಬಿ.ಎಸ್.ಸಿ ನರ್ಸಿಂಗ್ ತರಬೇತಿ
3	ಕೌಶಲ್ಯಾಭಿವೃದ್ಧಿ ತರಬೇತಿ
4	ಕಾನೂನು ಪದವೀಧರರಿಗೆ ಶಿಷ್ಯವೇತನ
IV. ಸಾಮಾಜಿಕ ಸಬಲೀಕರಣ ಕಾರ್ಯಕ್ರಮಗಳು	
1	PCR Act 1955 (ನಾಗರಿಕ ಹಕ್ಕುಗಳ ಸಂರಕ್ಷಣೆ ಕಾಯ್ದೆ) ರ ಅನುಷ್ಠಾನ
ಅ)	ಅಂತರ್‌ಜಾತಿ ವಿವಾಹವಾಗುವ ದಂಪತಿಗಳಿಗೆ ಪ್ರೋತ್ಸಾಹ ಧನ
ಆ)	ಅಸ್ಪೃಶ್ಯತೆಯ ನಿವಾರಣೆಗಾಗಿ ಅರಿವು ಮೂಡಿಸುವ ಕಾರ್ಯಕ್ರಮ
2	POA Act 1989 (ದೌರ್ಜನ್ಯ ತಡೆ ಅಧಿನಿಯಮ)ರ ಅನುಷ್ಠಾನ
ಅ)	ದೌರ್ಜನ್ಯಕ್ಕೊಳಗಾದ ಸಂತ್ರಸ್ತರಿಗೆ ಪರಿಹಾರ
ಆ)	ದೌರ್ಜನ್ಯಕ್ಕೊಳಗಾದ ಸಂತ್ರಸ್ತರಿಗೆ ಪುನರ್ವಸತಿ
3	ಸರಳ ವಿವಾಹ ಯೋಜನೆ

4	ವಿಧವಾ ಮರು ವಿವಾಹಕ್ಕೆ ಪ್ರೋತ್ಸಾಹಧನ
5	ಒಳ ಪಂಗಡಗಳ ಅಂತರ್ಜಾತಿ ವಿವಾಹಕ್ಕೆ ಪ್ರೋತ್ಸಾಹಧನ
6	ದೇವದಾಸಿಯರ ಮಕ್ಕಳ ವಿವಾಹಕ್ಕೆ ಪ್ರೋತ್ಸಾಹಧನ
V.	**ಆರ್ಥಿಕ ಅಭಿವೃದ್ಧಿ ಕಾರ್ಯಕ್ರಮಗಳು**
1	ಪರಿಶಿಷ್ಟ ಜಾತಿ/ ವರ್ಗದ ಉದ್ಯಮಿಗಳಿಗೆ ಬಡ್ಡಿ ಸಹಾಯಧನ ಕಾರ್ಯಕ್ರಮ
2	ಪರಿಶಿಷ್ಟ ಜಾತಿ/ವರ್ಗದ ಉದ್ಯಮಿಗಳಿಗೆ ಸಮಾನಾಂತರ ಖಾತರಿ ಯೋಜನೆ
3	ಪರಿಶಿಷ್ಟ ಜಾತಿ ಸಹಕಾರ ಸಂಘಗಳನ್ನು ಆರ್ಥಿಕವಾಗಿ ಸಬಲಗೊಳಿಸಲು ಷೇರುಬಂಡವಾಳ ಸಹಾಯಧನ ಕಾರ್ಯಕ್ರಮ.

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಪಿ.ಆರ್ ರಮೇಶ್ (ನಾಮನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1618ಕ್ಕೆ ಅನುಬಂಧ-1

1. ಉದ್ಯಮಶೀಲತಾ ಯೋಜನೆ (ಐ.ಎಸ್.ಬಿ) (ಬ್ಯಾಂಕುಗಳ ಸಹಯೋಗದಲ್ಲಿ)
2. ಸ್ವಯಂ ಉದ್ಯೋಗ ನೇರಸಾಲ ಯೋಜನೆ
3. ಗಂಗಾ ಕಲ್ಯಾಣ ಯೋಜನೆ-ವೈಯಕ್ತಿಕ ನೀರಾವರಿ ಕೊಳವೆ ಬಾವಿ
4. ಭೂ ಒಡೆತನ ಯೋಜನೆ
5. ಮೈಕ್ರೊ ಕ್ರೆಡಿಟ್ (ಪ್ರೇರಣಾ)
6. ಐರಾವತ
7. ಸಿಕ್ಕಿಂಗ್ ಮತ್ತು ಜಟ್ಟಿಂಗ್ ಯಂತ್ರ ಯೋಜನೆ
8. ಟ್ಯಾಬ್ ವಿತರಣಾ ಯೋಜನೆ
9. ದ್ವಿಚಕ್ರ ವಾಹನ ವಿತರಣಾ ಯೋಜನೆ

ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮವು ಕಾರ್ಯ ನಿರ್ವಹಿಸುತ್ತಿದೆ. ಪರಿಶಿಷ್ಟ ಜಾತಿಯ ಚರ್ಮ ಕುಶಲಕರ್ಮಿಗಳಿಗೆ ಜಾರಿಯಲ್ಲಿರುವ ಯೋಜನೆಗಳು ಈ ಕೆಳಕಂಡಂತಿದೆ.

1. ತರಬೇತಿ ಕಾರ್ಯಕ್ರಮಗಳು:
   a. ಕೌಶಲ್ಯ ಅಭಿವೃದ್ಧಿ ತರಬೇತಿ.
   b. ಕೌಶಲ್ಯ ಉನ್ನತೀಕರಣ ಯೋಜನೆ.
2. ಸ್ವಯಂ ಉದ್ಯೋಗ ಯೋಜನೆಗಳು:
   a. ಸ್ವಾವಲಂಬಿ / ಸಂಚಾರಿ ಮಾರಾಟ ಮಳಿಗೆ ಯೋಜನೆ.
   b. ದುಡಿಮೆ ಬಂಡವಾಳ ಯೋಜನೆ / ಮಹಿಳಾ ಕುಶಲಕರ್ಮಿಗಳಿಗೆ ಕಾರ್ಯಸ್ಫೂರ್ತಿ ಯೋಜನೆ.
   c. "ಚರ್ಮಶಿಲ್ಪ" ಯಂತ್ರಾಧಾರಿತ ಉತ್ಪಾದನಾ ಘಟಕ ಸ್ಥಾಪಿಸುವ ಯೋಜನೆ.
   d. ನೇರಸಾಲ ಯೋಜನೆ.
   e. ಪಾದುಕೆ ಕುಟೀರ ಒದಗಿಸುವ ಯೋಜನೆ.
   f. ಮಾರುಕಟ್ಟೆ ಸಹಾಯ ಯೋಜನೆ.

ಡಾ. ಬಾಬು ಜಗಜೀವನ ರಾಂ ಚರ್ಮಕಾರರ ವಸತಿ ಯೋಜನೆ.

ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಯೋಜನೆಗಳು.

ಪ್ರಗತಿ ಲಿಡ್‌ಕರ್ ಕಾಲೋನಿಗಳ ಸಮಗ್ರ ಅಭಿವೃದ್ಧಿ ಯೋಜನೆ.

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಪಿ.ಆರ್ ರಮೇಶ್ (ನಾಮನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1618ಕ್ಕೆ ಅನುಬಂಧ-2

ಸಮಾಜ ಕಲ್ಯಾಣ ಇಲಾಖೆಯ 2022-23ನೇ ಸಾಲಿನ ಆಯವ್ಯಯ ಘೋಷಣೆಗಳು/ನೂತನ ಯೋಜನೆಗಳು

1. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ, ಅಲ್ಪಸಂಖ್ಯಾತ ಮತ್ತು ಇತರೆ ವರ್ಗದ ಮಕ್ಕಳಲ್ಲಿ ಉನ್ನತ ವಿದ್ಯಾಭ್ಯಾಸವನ್ನು ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿನಿಲಯ" ಎಂಬ ಹೊಸ ಯೋಜನಯಡಿ ರಾಜ್ಯದ ಶೈಕ್ಷಣಿಕ ಕೇಂದ್ರಗಳಾದ ಬೆಳಗಾವಿ, ಹುಬ್ಬಳ್ಳಿ/ಧಾರವಾಡ, ಕಲಬುರಗಿ, ಮಂಗಳೂರು ಮತ್ತು ಮೈಸೂರಿನಲ್ಲಿ ತಲಾ 1,000 ಸಾಮರ್ಥ್ಯದ ಬಹುಮಡಿಯ ವಿದ್ಯಾರ್ಥಿನಿಲಯ ಸಮುಚ್ಛಯಗಳನ್ನು 250 ಕೋಟಿ ರೂ.ಗಳ ಮೊತ್ತದಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಿರ್ಮಿಸಲಾಗುವುದು.

---

2. ವಿದ್ಯಾರ್ಥಿನಿಲಯಗಳಲ್ಲಿ ಉತ್ತಮ ಗುಣಮಟ್ಟದ ಆಹಾರವನ್ನು ಒದಗಿಸಲು ಮಾಸಿಕ ಭೋಜನ ವೆಚ್ಚವನ್ನು 150 ರೂ.ಗಳಷ್ಟು ಹೆಚ್ಚಿಸಲು 107 ಕೋಟಿ ರು. ಹೆಚ್ಚುವರಿ ಅನುದಾನ ಒದಗಿಸಲಾಗುವುದು.

3. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಲ್ಲಿ ಬೇಡಿಕೆ ಮತ್ತು ಹಂಚಿಕೆಯನ್ನು ಸರಿದೂಗಿಸುವ ಉದ್ದೇಶದಿಂದ ನಿಲಯವಾರು ಅರ್ಜಿಗಳನ್ನು ಸ್ವೀಕರಿಸುವ ಬದಲು ತಾಲ್ಲೂಕುವಾರು ಅರ್ಜಿಗಳನ್ನು ಆಹ್ವಾನಿಸಿ, ವಿದ್ಯಾರ್ಥಿನಿಲಯಗಳಲ್ಲಿ ಸಿ.ಇ.ಟಿ ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶ ಕಲ್ಪಿಸಲಾಗುವುದು.

4. ಎಸ್.ಸಿ/ಎಸ್.ಟಿ ಮಹಿಳೆಯರಲ್ಲಿ ಉದ್ಯಮಶೀಲತೆಯನ್ನು ಉತ್ತೇಜಿಸಲು ಇಲಾಖೆಗಳ ಅಡಿಯಲ್ಲಿರುವ ಎಲ್ಲಾ ಅಭಿವೃದ್ಧಿ ನಿಗಮಗಳ ಸ್ವಯಂ ಉದ್ಯೋಗ ಮತ್ತು ಇತರೆ ಕಾರ್ಯಕ್ರಮಗಳಲ್ಲಿನ ಗುರಿಯಲ್ಲಿ ಎಸ್.ಸಿ/ಎಸ್.ಟಿ ಮಹಿಳೆಯರಿಗೆ ಶೇ.25ರಷ್ಟನ್ನು ಕಾಯ್ದಿರಿಸಲಿದೆ.

5. ಸಮಾಜ ಕಲ್ಯಾಣ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗಳ ವ್ಯಾಪ್ತಿಗೆ ಬರುವ ವಿವಿಧ ಅಭಿವೃದ್ಧಿ ನಿಗಮಗಳಿಂದ ಒಟ್ಟಾರೆ 800 ಕೋಟಿ ರೂ.ಗಳ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುವುದು.

6. ಪರಿಶಿಷ್ಟ ಜಾತಿ ಮತ್ತು ಪಂಗಡಗಳ 300 ಮಹಿಳಾ ಪದವೀಧರರಿಗೆ ಉದ್ಯಮಗಳನ್ನು ಸ್ಥಾಪಿಸಲು ಪೂರಕವಾಗುವಂತೆ ಪ್ರತಿಷ್ಠಿತ ಐ.ಐ.ಎಂ ಬೆಂಗಳೂರಿನಲ್ಲಿ ಉದ್ಯಮಶೀಲತಾ ತರಬೇತಿ ನೀಡಲಾಗುವುದು.

7. ಕರ್ನಾಟಕ ರಾಜ್ಯದಲ್ಲಿ ಅಸ್ಪೃಶ್ಯತೆಯನ್ನು ಸಂಪೂರ್ಣವಾಗಿ ನಿವಾರಣೆ ಮಾಡುವ ಧ್ಯೇಯದಿಂದ ರಾಜ್ಯಾದ್ಯಂತ ಜಾಗೃತಿ ಮೂಡಿಸಲುಇ "ವಿನಯ ಸಾಮರಸ್ಯ ಯೋಜನೆ" ಯನ್ನು ಜಾರಿಗೆ ತರಲಾಗುವುದು.

8. "2022-23ನೇ ಸಾಲಿನಲ್ಲಿ ವಿವಿಧ ಅಭಿವೃದ್ಧಿ ನಿಗಮಗಳ ಬಳಿ ಲಭ್ಯವಿರುವ ರೂ.615 ಕೋಟಿಗಳ ಜೊತೆಗೆ ಹೊಸದಾಗಿ ಅನುಮೋದಿಸಿರುವ ರೂ.500.00 ಕೋಟಿಗಳ ಹೆಚ್ಚುವರಿ ಅನುದಾನವೂ ಸೇರಿದಂತೆ ಒಟ್ಟಾರೆ ರೂ.1,115.00 ಕೋಟಿಗಳ ಮೊತ್ತದಲ್ಲಿ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು".

9. ವಸತಿ ರಹಿತ ಪರಿಶಿಷ್ಟ ಜಾತಿ ಮತ್ತು ಪಂಗಡದ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರಿಗೆ ರಾಜೀವ ಗಾಂಧಿ ವಸತಿ ನಿಗಮದ ಮೂಲಕ ಆದ್ಯತೆ ಮೇರೆಗೆ ಮನೆಗಳನ್ನು ನಿರ್ಮಿಸಲಾಗುವುದು ಹಾಗೂ ಇತರೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದು.

10. ಸಂವಿಧಾನ ಕರ್ತೃ ಡಾ.ಬಿ.ಆರ್.ಅಂಬೇಡ್ಕರ್ ಅವರು ಕರ್ನಾಟಕದಲ್ಲಿ ಭೇಟಿ ನೀಡಿರುವ ಪ್ರಮುಖ ಸ್ಥಳಗಳನ್ನುಗುರತಿಸಿ ಅಭಿವೃದ್ಧಿಪಡಿಸಲಾಗುವುದು.

11. ಪ್ರಪ್ರಥಮ ಬಾರಿಗೆ ಪರಿಶಿಷ್ಟ ಜಾತಿ ಮತ್ತು ಪಂಗಡದ ಯುವಕರಲ್ಲಿ ಸ್ವ-ಉದ್ಯೋಗವನ್ನು ಉತ್ತೇಜಿಸಲು ಹಾಗೂ ಆತ್ಮ ವಿಶ್ವಾಸವನ್ನು ವೃದ್ಧಿಸಲು 1.5ಲಕ್ಷ ರೂ.ಗಳ ಮೌಲ್ಯದ ವಿದ್ಯುತ್ ಚಾಲಿತ ತ್ರಿಚಕ್ರ ಸರಕು ಸಾಗಣೆ ವಾಹನಗಳ ಖರೀದಿಗೆ 50 ಸಾವಿರ ರೂ.ಗಳ ಧನಸಹಾಯ ನೀಡಲಾಗುವುದು.